ಇಲಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE:

# ರಾಜ್ಯಾದ್ಯಂತ ಸಂಭ್ರಮದ 65ನೇ ರಾಜ್ಯೋತ್ಸವ

## ಹಲವೆಡೆ ವಿವಿಧ ಕ್ಷೇತ್ರದ ಸಾಧಕರು, ಕೊರೋನಾ ವಾರಿಯರ್ಸ್‌ಗೆ ಸನ್ಮಾನ | ಬಹುತೇಕ ಕಡೆ ಉಸ್ತುವಾರಿ ಸಚಿವರಿಂದ ಧ್ವಜಾರೋಹಣ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೋವಿಡ್-19 ಹಿನ್ನೆಲೆಯಲ್ಲಿ ರಾಜ್ಯಾದ್ಯಂತ 65ನೇ ಕನ್ನಡ ರಾಜ್ಯೋತ್ಸವವನ್ನು ಭಾನುವಾರ ಸರಳವಾಗಿ ಆಚರಿಸಲಾಯಿತು. ಬಹುತೇಕ ಎಲ್ಲ ಜಿಲ್ಲಾಕೇಂದ್ರಗಳಲ್ಲಿ ಉಸ್ತುವಾರಿ ಸಚಿವರು ಧ್ವಜಾರೋಹಣ ನೆರವೇರಿಸಿದ್ದಾರೆ. ಬೆಳಗಾವಿಯಲ್ಲಿ ಕಲ್ಲು ತೂರಾಟ, ಲಾಠಿಪ್ರಹಾರ, ಕಲಬುರಗಿಯಲ್ಲಿ ಕಲ್ಯಾಣಕರ್ನಾಟಕ ಪ್ರತ್ಯೇಕ ರಾಜ್ಯಕ್ಕೆ ಆಗ್ರಹಿಸಿ ಪ್ರತ್ಯೇಕ ರಾಜ್ಯ ಧ್ವಜಾರೋಹಣಕ್ಕೆ ಯತ್ನಿಸಿದ ಘಟನೆ ಹೊರತುಪಡಿಸಿ ಬಹುತೇಕ ಎಲ್ಲ ಕಡೆ ಶಾಂತಿಯುತವಾಗಿ ಕನ್ನಡ ರಾಜ್ಯೋತ್ಸವ ಆಚರಿಸಲಾಗಿದೆ.

ಕೊಟ್ಟೂರಿನ ಕೊಟ್ಟೂರೇಶ್ವ ಸ್ವಾಮಿಗೆ ಕೆಂಪು ಮತ್ತು ಹಳದಿ ವಸ್ತ್ರಗಳಿಂದ ಶೃಂಗರಿಸಿ ವಿಶೇಷ ಪೂಜೆ ಸಲ್ಲಿಸಲಾಗಿದ್ದರೆ, ಬಳ್ಳಾರಿಯ ಕೋಟೆಯ ಮೇಲೆ 65 ಅಡಿ ಉದ್ದದ ಕನ್ನಡ ಧ್ವಜವನ್ನು ಹಾರಿಸಿ ಕನ್ನಡದ ಪ್ರೇಮ ಮೆರೆಯಲಾಗಿದೆ. ಧ್ವಜಾರೋಹಣದ ವೇಳೆ ರಾಯಚೂರು, ಬೆಳಗಾವಿ ಸೇರಿದಂತೆ ವಿವಿಧೆಡೆ ಕೊರೋನಾ ವಾರಿಯರ್‌ಗಳನ್ನು ಸನ್ಮಾನಿಸಲಾಗಿದೆ. ಚಿತ್ರದುರ್ಗ, ಉಡುಪಿ ಸೇರಿದಂತೆ ಹಲವು ಕಡೆ ವಿವಿಧ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು.



ಬೆಂಗಳೂರು ನಗರದಲ್ಲಿರುವ ಕಂಠೀರವ ಹೊರಾಂಗಣ ಕ್ರೀಡಾಂಗಣದಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆ ಆಯೋಜಿಸಿದ್ದ ರಾಜ್ಯೋತ್ಸವ ಸಮಾರಂಭದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಭುವನೇಶ್ವರಿ ದೇವಿಗೆ ಪುಷ್ಪನಮನ ಹಾಗೂ ಧ್ವಜಾರೋಹಣ ನೆರವೇರಿಸಿದರು.

ರಾಯಚೂರಲ್ಲಿ ಡಿಸಿಎಂ ಲಕ್ಷ್ಮಣ ಸವದಿ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ನಮ್ಮ ಕನ್ನಡ ಭಾಷೆ ಸಮೃದ್ಧವಾಗಿದೆ ಎಂದು ನಾವು ಕೈಕಟ್ಟಿ ಕುಳಿತುಕೊಳ್ಳಬಾರದು. ಅನ್ಯ ಭಾಷೆಗಳ ಅತಿಯಾದ ದಾಳಿ, ಆಧುನಿಕ ಶಿಕ್ಷಣ ವಿಷಯದಲ್ಲಿ ಎಚ್ಚರಿಕೆ ವಹಿಸಿ ಯುವಜನಾಂಗದಲ್ಲಿ ಕನ್ನಡದ ಬಗ್ಗೆ ಇನ್ನಷ್ಟು ಪ್ರೀತಿ ಮತ್ತು ಕಾಳಜಿ ಮೂಡಿಸಬೇಕು ಎಂದರು.

ಚಿಕ್ಕಬಳ್ಳಾಪುರದಲ್ಲಿ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ.ಸುಧಾಕರ್ ಧ್ವಜಾರೋಹಣ ನೆರವೇರಿಸಿ ಮಾತನಾಡಿ, ರಾಜ್ಯದಲ್ಲಿ ಆಡಳಿತ ಭಾಷೆಯಾಗಿ ಕನ್ನಡ ಪರಿಪೂರ್ಣವಾಗಿ ಅನುಷ್ಠಾನಗೊಳ್ಳುವ ಅಗತ್ಯವಿದ್ದು, ನ್ಯಾಯಾಲಯಗಳಲ್ಲಿ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಕನ್ನಡ ಪ್ರಧಾನ ಭಾಷೆಯಾಗಬೇಕಿದೆ ಎಂದರು.

ಬೆಳಗಾವಿಯಲ್ಲಿ ಜಲಸಂಪನ್ಮೂಲ ಸಚಿವ ರಮೇಶ್ ಜಾರಕಿಹೊಳಿ ನಾಡದೇವಿ ಭುವನೇಶ್ವರಿಗೆ ಪುಷ್ಪಾರ್ಚನೆ ಮಾಡಿ, ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಇದೇ ವೇಳೆ 19 ವಾರಿಯರ್ಸ್‌ಗಳನ್ನು ಸನ್ಮಾನಿಸಿದರು. ಬಾಗಲಕೋಟೆ ಜಿಲ್ಲೆಯಲ್ಲಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಧ್ವಜಾರೋಹಣ ನೆರವೇರಿಸಿದರು. ಹಾವೇರಿಯಲ್ಲಿ ಗೃಹ ಸಚಿವ ಬಸವರಾಜ್ ಬೊಮ್ಮಾಯಿ, ಕೊಪ್ಪಳದಲ್ಲಿ ಕೃಷಿ ಸಚಿವ ಬಿ.ಸಿ.ಪಾಟೀಲ್, ಮೈಸೂರಿನಲ್ಲಿ ಸಹಕಾರ ಸಚಿವ ಎಸ್.ಟಿ.ಸೋಮಶೇಖರ್, ಧಾರವಾಡದಲ್ಲಿ ಕೈಗಾರಿಕಾ ಸಚಿವ ಜಗದೀಶ್ ಶೆಟ್ಟರ್, ಗದಗದಲ್ಲಿ ಗಣಿ ಸಚಿವ ಸಿ.ಸಿ.ಪಾಟೀಲ್, ಕಾರವಾರದಲ್ಲಿ ಕಾರ್ಮಿಕ ಸಚಿವ ಶಿವರಾಮ್ ಹೆಬ್ಬಾರ್, ಶಿವಮೊಗ್ಗದಲ್ಲಿ ಗ್ರಾಮೀಣಾಭಿವೃದ್ಧಿ ಸಚಿವ ಕೆ.ಎಸ್.ಈಶ್ವರಪ್ಪ, ತುಮಕೂರಲ್ಲಿ ಕಾನೂನು ಸಚಿವ ಮಾಧುಸ್ವಾಮಿ, ಚಿತ್ರದುರ್ಗದಲ್ಲಿ ಸಮಾಜ ಕಲ್ಯಾಣ ಸಚಿವ ಬಿ.ಶ್ರೀರಾಮುಲು ಧ್ವಜಾರೋಹಣ ನೆರವೇರಿಸಿದ್ದಾರೆ.